# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,
## 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003

**ಸಂಖ್ಯೆ : ಸಿಎಸ್1/ಗಣಕಶಾಖೆ/ಎಸ್.ಎಸ್.ಎಲ್.ಸಿ./ಶುಲ್ಕ ಪಾವತಿ/01/2022-23** **ದಿನಾಂಕ: 21-12-2022**

**- ಸುತ್ತೋಲೆ -**

ವಿಷಯ: ಮಾರ್ಚ್/ಏಪ್ರಿಲ್-2023 ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಗೆ ನೋಂದಣಿಯಾಗಿರುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸುವ ಬಗ್ಗೆ.

ಉಲ್ಲೇಖ: 1) ಮಂಡಲಿಯ ಅಧಿಸೂಚನೆ ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ ಮಾರ್ಚ್-23/14/2022-23 ದಿನಾಂಕ: 17-09-2022

2) ಮಂಡಲಿಯ ಗಣಕ ಶಾಖೆಯ ಸುತ್ತೋಲೆ ಸಂ : ಸಿಎಸ್1/ಎಸ್ಎಸ್ಎಲ್ಸಿ/ ಮಾರ್ಚ್-2023/01/2022-23 ದಿನಾಂಕ: 28-09-2022

*******

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ವತಿಯಿಂದ ನಡೆಯಲಿರುವ ಮಾರ್ಚ್/ಏಪ್ರಿಲ್-2023 ರ ಎಸ್.ಎಸ್.ಎಲ್.ಸಿ. ಮುಖ್ಯ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ನೋಂದಣಿ ಮಾಹಿತಿಗಳನ್ನು ಮುಖ್ಯ ಶಿಕ್ಷಕರ ವತಿಯಿಂದ ಮಂಡಲಿಯ ಜಾಲತಾಣದ (https://sslc.karnataka.gov.in) ಶಾಲಾ ಲಾಗಿನ್‌ನಲ್ಲಿ ಈಗಾಗಲೇ ಪಡೆಯಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರಿಗೆ ತಮ್ಮ ಶಾಲೆಯ ಮಾರ್ಚ್/ಏಪ್ರಿಲ್-2023ರ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಶಾಲಾ ಹಾಗೂ ಪುನರಾವರ್ತಿತ ಖಾಸಗಿ ಅಭ್ಯರ್ಥಿಗಳು) ವಿವರಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡಲು ಅವಕಾಶ ಕಲ್ಪಿಸಲಾಗಿತ್ತು. ಪ್ರಸ್ತುತ, ನೋಂದಣಿಯಾದ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಮಂಡಲಿಗೆ ಪಾವತಿಸಬೇಕಾಗಿದೆ.

1) ಮಾರ್ಚ್/ಏಪ್ರಿಲ್-2023ರ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸುವ ಚಲನ್ **ಮಂಡಲಿಯ ಶಾಲಾ ಲಾಗಿನ್‌ನಲ್ಲಿಯೇ ದಿನಾಂಕ: 21-12-2022** ರಿಂದ ಜನರೇಟ್ ಆಗುತ್ತದೆ.

2) **ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್‌ನ್ನು ಬಳಸಿಯೇ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಮಂಡಲಿಯ ಯಾವುದೇ ಇತರ ಚಲನ್ ಬಳಸಿ ಶುಲ್ಕ ಪಾವತಿಸಬಾರದು. ಪಾವತಿಸಿದಲ್ಲಿ ಅಂತಹ ಚಲನ್‌ನ್ನು ಪರಿಗಣಿಸಲಾಗುವುದಿಲ್ಲ.**

3) **ಒಮ್ಮೆ ಚಲನ್ ಡೌನ್‌ಲೋಡ್ ಮಾಡಿಕೊಂಡ ನಂತರ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಡೇಟ್ ಮಾಡಲು ಅವಕಾಶವಿರುವುದಿಲ್ಲ. ಆದ್ದರಿಂದ ಯಾವುದೇ ಸೇರ್ಪಡೆ, updation or delete ಮಾಡಬೇಕಾಗಿದ್ದಲ್ಲಿ ಅದನ್ನು ಮಾಡಿ ನಂತರವೇ ಚಲನ್ ಡೌನ್‌ಲೋಡ್ ಮಾಡಿಕೊಳ್ಳುವುದು.**

4) ಮಂಡಲಿಯ ಶಾಲಾ ಲಾಗಿನ್‌ನಲ್ಲಿ ಚಲನ್ ಜನರೇಟ್ ಮಾಡಲು Registration for 2023 SSLC Main Exam ಮೆನುವಿನಲ್ಲಿ ನೀಡಲಾಗಿರುವ Dropdown list ನಲ್ಲಿರುವ Download Challan - 2023 SSLC Exam ಮೆನು ಮೇಲೆ ಕ್ಲಿಕ್ ಮಾಡಿದಾಗ, ಮೊದಲು ಅಂತಿಮ ನಾಮಿನಲ್ ರೋಲ್‌ನ್ನು ಡೌನ್‌ಲೋಡ್ ಮಾಡಿಕೊಳ್ಳತಕ್ಕದ್ದು. ನಾಮಿನಲ್ ರೋಲ್‌ನ್ನು ಡೌನ್‌ಲೋಡ್ ಮಾಡಿಕೊಂಡ ನಂತರವೇ ಚಲನ್ ಡೌನ್‌ಲೋಡ್ ಆಗುತ್ತದೆ.

5) ಒಂದು ವೇಳೆ ತಮ್ಮ ಶಾಲೆಯಲ್ಲಿ ಪರೀಕ್ಷಾ ನೋಂದಣಿಗೆ ಸಂಬಂಧಿಸಿದಂತೆ ಯಾವುದಾದರೂ Errors ಇದ್ದಲ್ಲಿ ಆ Errors List display ಆಗುತ್ತದೆ. ಮುಖ್ಯಶಿಕ್ಷಕರು ಆ Errors ನ್ನು ಸರಿಪಡಿಸಿದ ನಂತರವೇ Challan Generate ಆಗುತ್ತದೆ.

Error type 1: Photo / Signature not uploaded
Error type 2: RD Number not entered for students who have claimed Fee Exemption

6) ಮುಖ್ಯ ಶಿಕ್ಷಕರು ಚಲನ್‌ನ್ನು ಡೌನ್‌ಲೋಡ್ ಮಾಡಿಕೊಂಡ ನಂತರ ತಮ್ಮ ಶಾಲೆಯ ವತಿಯಿಂದ ಮಾರ್ಚ್-2023ರ ಪರೀಕ್ಷೆಗೆ ನೋಂದಣಿಯಾಗಿರುವ ಶಾಲಾ ವಿದ್ಯಾರ್ಥಿಗಳ (CCERF), ಖಾಸಗಿ ವಿದ್ಯಾರ್ಥಿಗಳ (CCEPF), ಪುನರಾವರ್ತಿತ ಶಾಲಾ ಅಭ್ಯರ್ಥಿಗಳ (CCERR), ಪುನರಾವರ್ತಿತ ಖಾಸಗಿ ಅಭ್ಯರ್ಥಿಗಳ (CCEPR) ಹಾಗೂ

2003ರಿಂದ 2010ರವರೆಗಿನ NSR ಮತ್ತು NSPR ಅಭ್ಯರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಚಲನ್ ಜನರೇಟ್ ಆಗಿದೆಯೇ ಎಂದು ಪರಿಶೀಲಿಸಿಕೊಳ್ಳತಕ್ಕದ್ದು.

7) ಮಾರ್ಚ್–2023ರ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ನೋಂದಣಿಯಾಗಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಮಂಡಲಿಯ ಜಾಲತಾಣದಲ್ಲಿ ವಿದ್ಯಾರ್ಥಿಗಳ ಮಾಹಿತಿ ನೋಂದಣಿ ಮಾಡುವ ಮತ್ತು ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ಪ್ರಕ್ರಿಯೆಗೆ ಸಂಬಂಧಿಸಿದ ವೆಚ್ಚ ಪ್ರತಿ ವಿದ್ಯಾರ್ಥಿಗೆ **ರೂ.25/–ರಂತೆ** ಸಾದಿಲ್ವಾರು ವೆಚ್ಚ ಲೆಕ್ಕ ಹಾಕಲಾಗುತ್ತದೆ.

8) **ಮಂಡಲಿಗೆ ಪಾವತಿಸಬೇಕಾದ ಪರೀಕ್ಷಾ ಶುಲ್ಕದ ಬಾಬ್ತು** = ಶಾಲೆಯಲ್ಲಿ ಪರೀಕ್ಷೆಗೆ ನೋಂದಣಿಯಾಗಿರುವ ಎಲ್ಲಾ ರೀತಿಯ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಮೊತ್ತ – ವಿದ್ಯಾರ್ಥಿಗಳ ಮಾಹಿತಿ ನೋಂದಣಿ ಮಾಡುವ ಮತ್ತು ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ಪ್ರಕ್ರಿಯೆಗೆ ಸಂಬಂಧಿಸಿದ ಸಾದಿಲ್ವಾರು ವೆಚ್ಚ.

9) **ಮಂಡಲಿಗೆ ಪಾವತಿಸಬೇಕಾದ ಪರೀಕ್ಷಾ ಶುಲ್ಕದ ಬಾಬ್ತು ಕೆಲವೊಮ್ಮೆ 0 (ಶೂನ್ಯ) ಅಥವಾ ಋಣ ಮೊತ್ತ ಇರಬಹುದು. ಅಂತಹ ಸಂದರ್ಭದಲ್ಲಿ ಶುಲ್ಕವನ್ನು ಬ್ಯಾಂಕಿಗೆ ಪಾವತಿಸುವ ಅಗತ್ಯವಿರುವುದಿಲ್ಲ. ಆದರೆ, ಅಂತಹ ಚಲನ್‌ನ School copy ಯನ್ನು ಕಡ್ಡಾಯವಾಗಿ ಮಂಡಲಿಗೆ ಸಲ್ಲಿಸುವುದು.**

10) ಪರೀಕ್ಷಾ ಶುಲ್ಕ ಪಾವತಿಸುವ ಚಲನ್ ದ್ವಿಪ್ರತಿಯಲ್ಲಿ (Bank copy & School copy) ಜನರೇಟ್ ಆಗುತ್ತದೆ. ಅದನ್ನು ಬಳಸಿ Union Bank of India ಅಥವಾ ಯಾವುದೇ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಬೇಕು. Union Bank of India ನಲ್ಲಿ ಪಾವತಿಸಿದಲ್ಲಿ ಬ್ಯಾಂಕ್ ಸೇವಾ ಶುಲ್ಕ ರೂ. 5/– ಆಗಿರುತ್ತದೆ. ಇತರೆ ಯಾವುದೇ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಪಾವತಿಸಿದಲ್ಲಿ ಆಯಾ ಬ್ಯಾಂಕ್ ವಿಧಿಸುವ ಸೇವಾ ಶುಲ್ಕವನ್ನು ಭರಿಸಬೇಕಿರುತ್ತದೆ. ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ Bank copy ಯನ್ನು ಬ್ಯಾಂಕಿನಲ್ಲಿಯೇ ಉಳಿಸಿಕೊಂಡು School copy ಯನ್ನು ತಮಗೆ ಹಿಂದಿರುಗಿಸಲಾಗುತ್ತದೆ.

**ಪರೀಕ್ಷಾ ಶುಲ್ಕದ ಆನ್‌ಲೈನ್ ಚಲನ್ ಮುದ್ರಿಸಿಕೊಳ್ಳಲು ಮತ್ತು ಶುಲ್ಕ ಪಾವತಿಸಲು ನಿಗದಿಪಡಿಸಿದ ದಿನಾಂಕ**

| ಕ್ರ ಸಂ. | ವಿವರ | ನಿಗದಿಪಡಿಸಿದ ದಿನಾಂಕ |
|---|---|---|
| 1 | ಮಂಡಲಿ ಜಾಲತಾಣದ ಶಾಲಾ ಲಾಗಿನ್ ಮೂಲಕ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಳ್ಳಲು ನಿಗದಿಪಡಿಸಿದ ದಿನಾಂಕ | 21.12.2022 ರಿಂದ 27.12.2022 |
| 2 | ಕ್ರಮ ಸಂಖ್ಯೆ–1ರಂತೆ ಚಲನ್ ಮುದ್ರಿಸಿಕೊಂಡು ಬ್ಯಾಂಕ್‌ಗೆ ಪರೀಕ್ಷಾ ಶುಲ್ಕ ಜಮೆ ಮಾಡಲು ನಿಗದಿಪಡಿಸಿದ ದಿನಾಂಕ | 21.12.2022 ರಿಂದ 29.12.2022 |
| 3 | 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಪರೀಕ್ಷಾ ಶುಲ್ಕವನ್ನು ಹಳೆಯ ಪದ್ಧತಿಯಂತೆ ಮಂಡಲಿಯ ನೆಫ್ಟ್ ಚಲನ್ ಮೂಲಕ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಲು ನಿಗದಿಪಡಿಸಿದ ಅಂತಿಮ ದಿನಾಂಕ | 29.12.2022 ರವರೆಗೆ |
| 4 | **ಕೆಳಕಂಡ ದಾಖಲೆಗಳನ್ನು ಮಂಡಲಿಗೆ ಸಲ್ಲಿಸಲು ನಿಗದಿಪಡಿಸಿದ ದಿನಾಂಕ** 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) MSA ಮತ್ತು ಹಿಂದಿನ ಪದ್ಧತಿಯಂತೆ ಮಂಡಲಿಯ ನೆಫ್ಟ್ ಚಲನ್ ಮೂಲಕ ಶುಲ್ಕ ಪಾವತಿಸಿದ ಮೂಲ ಚಲನ್ ಹಾಗೂ ಸಂಬಂಧಿಸಿದ ಇತರೆ ದಾಖಲೆಗಳು | 06.01.2023 ರವರೆಗೆ |

ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಶಾಲೆಗಳ ಮುಖ್ಯಸ್ಥರು ನಿಗದಿತ ಅವಧಿಯಲ್ಲಿ ಶುಲ್ಕ ಪಾವತಿ ಮಾಡುವ ಬಗ್ಗೆ ಕ್ರಮ ವಹಿಸುವುದು.

(ಗೋಪಾಲಕೃಷ್ಣ ಹೆಚ್.ಎನ್.) 21/12
ನಿರ್ದೇಶಕರು, (ಪರೀಕ್ಷೆಗಳು)

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ